ಜಾಬಗೆರೆ ಗ್ರಾಮದಲ್ಲಿ ನವೋದಯ ಶಾಲೆ.

3402(4443) ಶ್ರೀ ಪಾಪಣ್ಣ ವಿ. (ಹುಣಸೂರು) :— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹುಣಸೂರು ತಾಲ್ಲೂಕಿನ ಜಾಬಗೆರೆ ಗ್ರಾಮದಲ್ಲಿ ನವೋದಯ ಶಾಲೆಯನ್ನು ತೆರೆಯುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಶಾಲೆಯನ್ನು ತೆರೆಯಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳು ಯಾವುವು?

ಶ್ರೀ ಹಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :—

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಹಿಂದುಳಿದ ಮತ್ತು ಅಲ್ಪಸಂಖ್ಯಾತರ ವಸತಿ ವಿದ್ಯಾರ್ಥಿನಿಲಯಗಳು.

3403(4499) ಶ್ರೀ ವಿ. ಪಾಪಣ್ಣ (ಹುಣಸೂರು) :— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹುಣಸೂರು ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ವಸತಿ ನಿಲಯಗಳಿಗೆ ಪ್ರವೇಶ ಪಡೆದುಕೊಳ್ಳಲು ಅತಿ ಹೆಚ್ಚಿನ ವಿದ್ಯಾರ್ಥಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಹೆಚ್ಚಿನ ವಿದ್ಯಾರ್ಥಿಗಳನ್ನು ಸೇರಿಸಿಕೊಳ್ಳಲು ಏನು ಕ್ರಮ ಕೈಗೊಳ್ಳಲಾಗಿದೆ

ಇ) ಹುಣಸೂರು ತಾಲ್ಲೂಕು ಉಪ ವಿಭಾಗದ ಮುಖ್ಯ ಕೇಂದ್ರವಾಗಿದ್ದು, ಇಲ್ಲಿ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಹಾಗೂ ಗಿರಿಜನರು ಅತಿ ಹೆಚ್ಚಿನ ಸಂಖ್ಯೆಯಲ್ಲಿರುತ್ತಾರೆ. ಇವರುಗಳಿಗೆ ಹೊಸದಾಗಿ ವಿದ್ಯಾರ್ಥಿನಿಲಯಗಳನ್ನು ಮಂಜೂರಾತಿ ಕೋರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಹೆಚ್ಚಿನ ವಿದ್ಯಾರ್ಥಿಗಳನ್ನು ಸೇರಿಸಿಕೊಳ್ಳಲು ಏನು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಹಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :—

ಅ) ಹೌದು.

ಆ) ವಿದ್ಯಾರ್ಥಿನಿಲಯಗಳಲ್ಲಿ ಸಂಖ್ಯಾಬಲವನ್ನು ಹೆಚ್ಚಿಸಬೇಕೆಂಬ ಪ್ರಸ್ತಾವನೆ ಬಂದಿದ್ದು, ಅದು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಹೌದು.

ಈ) ಎರಡನೆ ಪ್ರಶ್ನೆಗೆ ನೀಡಿರುವ ಉತ್ತರದ ಅನ್ವಯ ಉತ್ತರಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಕಾವೇರಿ ನೀರಿನ ಯೋಜನೆ.

3404(4498) ಶ್ರೀ ವಿ. ಪಾಪಣ್ಣ (ಹುಣಸೂರು) :— ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1. ಹುಣಸೂರು ಪಟ್ಟಣಕ್ಕೆ ದಿನಾಂಕ 28-08-2000ರಂದು ಸಚಿವರು ಭೇಟಿ ನೀಡಿದಾಗ ಇಲ್ಲಿ ಲಕ್ಷ್ಮಣತೀರ್ಥ ನೀರು ಕಲುಷಿತಗೊಂಡು ಹಿನ್ನೆಲೆಯಲ್ಲಿ, ಕೆ.ಆರ್. ನಗರದಿಂದ ಕಾವೇರಿ ನೀರನ್ನು ಸರಬರಾಜು ಮಾಡುವ ಯೋಜನೆಯನ್ನು ಮುಂದೆ ಇಟ್ಟಾಗ ಪರಿಶೀಲಿಸಿ ಮಂಜೂರಾತಿ ಮಾಡುವುದಾಗಿ ಭರವಸೆ ನೀಡಿರುವುದು ನಿಜವಲ್ಲವೆ?

2. ಹಾಗಿದ್ದಲ್ಲಿ ಯೋಜನೆಗೆ ಸರ್ಕಾರವು ಯಾವಾಗ ಮಂಜೂರಾತಿಯನ್ನು ನೀಡಿ ಯೋಜನೆಯನ್ನು ಪ್ರಾರಂಭಿಸುತ್ತದೆ? ಈ ಯೋಜನೆಯನ್ನು ಮಂಜೂರಾತಿ ಮಾಡಿ, ಕೆಲಸವನ್ನು ಪ್ರಾರಂಭಿಸುವವರೆಗೂ ಜನರಿಗೆ ಕುಡಿಯುವ ನೀರಿನ ಬಗ್ಗೆ ಕಿರು ನೀರು ಯೋಜನೆ ಹಾಗೂ ಬೋರ್‌ವೆಲ್‌ಗಳನ್ನು ತೆಗೆಸಲು ಸರ್ಕಾರವು ಕ್ರಮ ತೆಗೆದುಕೊಂಡಿದೆಯೇ?

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :—

1. ನಿಜ

2. ಹುಣಸೂರು ಪಟ್ಟಣಕ್ಕೆ ಕಾವೇರಿ ನೀರು ಸರಬರಾಜು ಮಾಡುವ ಯೋಜನೆಯನ್ನು ರೂ. 1350.00 ಲಕ್ಷಗಳ ಅಂದಾಜು ಪಟ್ಟಿಯನ್ನು 97-98ನೇ ವರ್ಷದಲ್ಲಿ ತಯಾರಿಸಲಾಗಿ ಈಗ ಈ ಅಂದಾಜು ಪಟ್ಟಿಯ ಮರು ಪರಿಷ್ಕರಣೆ ಕಾರ್ಯಮುಕ್ತಾಯದ ಹಂತದಲ್ಲಿದೆ.

ಹೌದು